**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

File No:DTE-ADMI0ACM2/26/2024

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:20-06-2024.

**-:: ಸುತ್ತೋಲೆ ::-**

**ವಿಷಯ:** 2024-25ನೇ ಸಾಲಿನ **ಅರೆಕಾಲಿಕ (ಪಾರ್ಟ್-ಟೈಮ್) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ** ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಅರ್ಜಿಗಳನ್ನು ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕ ವಿಸ್ತರಿಸಿರುವ ಬಗ್ಗೆ.

**ಉಲ್ಲೇಖ:**
1. ಪ್ರಾಂಶುಪಾಲರು, ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಸ್‌ಜೆಇಪಿ/02/ಪ್ರವೇಶ/2024/129, ದಿ:13-06-2024.
2. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:21-05-2024.

********

2024-25ನೇ ಸಾಲಿನ **ಅರೆಕಾಲಿಕ (ಪಾರ್ಟ್-ಟೈಮ್) ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ** ಉಲ್ಲೇಖ(2)ರ ಅಧಿಸೂಚನೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ಸ್ವೀಕರಿಸಲು **15-06-2024** ಕೊನೆಯ ದಿನಾಂಕ ಮತ್ತು ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು. ಉಲ್ಲೇಖ(1)ರ ಪ್ರಾಂಶುಪಾಲರ ಪತ್ರದಲ್ಲಿ ಪ್ರವೇಶ ಅರ್ಜಿಗಳು ಕಡಿಮೆ ಬಂದಿರುವ ಪ್ರಯುಕ್ತ, ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸುವಂತೆ ಮನವಿ ಕೋರಿರುತ್ತಾರೆ. ಪರಿಶೀಲಿಸಲಾಗಿ, **ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ದಿನಾಂಕ:12-07-2024ರ ವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.** ಅಭ್ಯರ್ಥಿಗಳ ಪ್ರವೇಶಕ್ಕೆ ಸಂಬಂಧಿಸಿದ ವೇಳಾಪಟ್ಟಿಯು ಈ ಕೆಳಕಂಡಂತೆ ಇರುತ್ತದೆ.

**ಆಫ್-ಲೈನ್ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ಪ್ರಥಮ ಸೆಮಿಸ್ಟರ್ ಪಾರ್ಟ್‌ಟೈಮ್ ಡಿಪ್ಲೋಮಾ ಪ್ರವೇಶ (ಮಾತ್ರ) ಪ್ರಕ್ರಿಯೆಯ ಪರಿಷ್ಕೃತ ವೇಳಾಪಟ್ಟಿ**

| | | |
|---|---|---|
| 1 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: | 12-07-2024 ರವರೆಗೆ |
| 2 | ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಣೆ | 13-07-2024 |
| 3 | ಅಂತಿಮ ಮೆರಿಟ್ ಪಟ್ಟಿ ಪ್ರಕಟಣೆ | 15-07-2024 |
| 4 | ವಿಶೇಷ ಗುಂಪಿನ ಅಭ್ಯರ್ಥಿಗಳ ಸಂದರ್ಶನ ಮತ್ತು ಆಯ್ಕೆ | 16-07-2024 |
| 5 | ಸಂದರ್ಶನ ಮತ್ತು ಅಭ್ಯರ್ಥಿಗಳ ಆಯ್ಕೆ | 18-07-2024 ಮತ್ತು 19-07-2024ರವರೆಗೆ |
| **ಡಿಪ್ಲೋಮಾ ಸೀಟು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಅರ್ಹ ಅಭ್ಯರ್ಥಿಗಳಿಗೆ ಅವರುಗಳ ಮೆರಿಟ್ ಹಾಗೂ ಮೀಸಲಾತಿಗನುಗುಣವಾಗಿ ಸಂಬಂಧಪಟ್ಟ ಪಾಲಿಟೆಕ್ನಿಕ್‌ಗಳಲ್ಲಿ ಸೀಟುಗಳ ಲಭ್ಯತೆ ಇರುವ ಷರತ್ತಿಗೊಳಪಟ್ಟು ಸೀಟು ಹಂಚಿಕೆ ಮಾಡಲಾಗುವುದು.** | | |

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, **ದಿ:19-07-2024** ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ನಿರ್ದೇಶಕರು
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು
3. ಪ್ರಿನ್ಸಿಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು

– ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು.

<u>ಪ್ರತಿ ಮಾಹಿತಿಗಾಗಿ:-</u>

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ.
4) ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ,
5) ಸಾರ್ವಜನಿಕ ಸಂಪರ್ಕಾಧಿಕಾರಿ, **ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,**
6) ಎಸ್‌ಟಿಎಲ್, ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ.ಆರ್.ಎಸ್ ವಿಭಾಗಕ್ಕೆ – ಸಿ.ಬಿ.ಎಸ್.ಇ, ಐ.ಸಿ.ಎಸ್.ಇ **ಹಾಗೂ ಕರ್ನಾಟಕೇತರ ಅಭ್ಯರ್ಥಿಗಳಿಗೆ ಅರ್ಹತಾ** ಪ್ರಮಾಣ ಪತ್ರ ವಿತರಿಸುವ ಬಗ್ಗೆ ಇ-ಮಾಹಿತಿ ಪುಸ್ತಕದಲ್ಲಿ ತಿಳಿಸಿರುವಂತೆ ಕ್ರಮಜರುಗಿಸತಕ್ಕದ್ದು.
8) ಇ-ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
9) ಕಡತಕ್ಕೆ.